# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ**: 2025-26ನೇ ಸಾಲಿನ ಆಯವ್ಯಯ ಕಂಡಿಕೆ-338ರಲ್ಲಿ ಘೋಷಣೆಯಾಗಿರುವ ಕೋಲಾರ ಜಿಲ್ಲೆಯ ಶಿವಾರಪಟ್ಟಣದ ಕೈಗಾರಿಕಾ ಪ್ರದೇಶದಲ್ಲಿ Multi Sector Net Zero Sustainability Industrial Park ಅನ್ನು PPP ಮಾದರಿಯಲ್ಲಿ ಸ್ಥಾಪಿಸುವ ಯೋಜನೆಯ ಕುರಿತು.

**ಓದಲಾಗಿದೆ**: ಸಿ.ಇ.ಒ. & ಇ.ಎಂ., ಕೆ.ಐ.ಎ.ಡಿ.ಬಿ. ಇವರ ಪತ್ರ ಸಂಖ್ಯೆ: ಕೆಐಎಡಿಬಿ/ ತಾಂತ್ರಿಕ/ ಮು.ಅ-1/2454/ 2025-26, ದಿನಾಂಕ:14.05.2025.

**ಪ್ರಸ್ತಾವನೆ:**

2025-26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 338 ರಲ್ಲಿ "ಮಾಲಿನ್ಯವನ್ನು ನಿಯಂತ್ರಣ ಮಾಡುವ ನಿಟ್ಟಿನಲ್ಲಿ ಕೋಲಾರ ಜಿಲ್ಲೆಯ ಶಿವಾರಪಟ್ಟಣದ ಕೈಗಾರಿಕಾ ಪ್ರದೇಶದಲ್ಲಿ multi sector net zero sustainability industrial park ಅನ್ನು PPP ಮಾದರಿಯಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿದೆ" ಎಂದು ಘೋಷಿಸಲಾಗಿರುತ್ತದೆ.

ಅದರನ್ವಯ, ಮೇಲೆ ಓದಲಾದ ಸಿಇಒ & ಇಎಂ, ಕೆಐಎಡಿಬಿ ರವರ ಪತ್ರದಲ್ಲಿ ಕೋಲಾರ ಜಿಲ್ಲೆ, ಶಿವಾರಪಟ್ಟಣದ ಕೈಗಾರಿಕಾ ಪ್ರದೇಶದಲ್ಲಿ multi sector net zero sustainability industrial park ಅನ್ನು PPP ಮಾದರಿಯಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿರುವ ಪ್ರದೇಶದಲ್ಲಿ ಜಮೀನುಗಳನ್ನು ಭೂಸ್ವಾಧೀನಪಡಿಸಲು ಕೆಐಎಡಿ ಕಲಂ 28(4)ರನ್ವಯ ಅಂತಿಮ ಅಧಿಸೂಚನೆ ಹೊರಡಿಸಿದ ನಂತರ ಪ್ರದೇಶದಲ್ಲಿ multi sector net zero sustainability industrial park ಅನ್ನು PPP ಮಾದರಿಯಲ್ಲಿ ನಿರ್ಮಾಣ ಮಾಡಲು ಈ ಕೆಳಕಂಡ ಅಂಶಗಳನ್ನು ಅಳವಡಿಸಿಕೊಂಡು ನುರಿತ ಅನುಭವವುಳ್ಳ ಸಮಾಲೋಚಕರನ್ನು ನೇಮಿಸಿ, ವಿವರವಾದ ಯೋಜನಾ ವರದಿಯನ್ನು ತಯಾರಿಸಿ ಸರ್ಕಾರದ ಅನುಮೋದನೆಗೆ ಸಲ್ಲಿಸಲು ಕ್ರಮವಹಿಸಲಾಗುವುದೆಂದು ತಿಳಿಸಿರುತ್ತಾರೆ

- ಘನತ್ಯಾಜ್ಯಗಳನ್ನು ಸಂಪೂರ್ಣ ಮರುಬಳಕೆ
- ಸಂಸ್ಕರಿಸಿದ ನೀರಿನ ಬಳಕೆ ಹಾಗೂ ನೀರಿನ ಸಂಸ್ಕರಣೆ
- ಸೌರಶಕ್ತಿ ಬಳಕೆ ಹಾಗೂ ಸೌರಶಕ್ತಿ ಉತ್ಪಾದನೆ.
- ನೈಸರ್ಗಿಕ ಸಂಪನ್ಮೂಲ ಸದ್ಬಳಕೆ ಹಾಗೂ ಸಂರಕ್ಷಣೆಗೆ ಒತ್ತು ನೀಡುವುದು.
- ನೈಸರ್ಗಿಕ ಸುಸ್ಥಿರತೆಗೆ ಅಗತ್ಯವಿರುವ ಹೊಸ ಆವಿಷ್ಕಾರಗಳ ಪರಿಚಯ ಮತ್ತು ಅಳವಡಿಕೆ ಇತ್ಯಾದಿ.

ಅದರನ್ವಯ, ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಐ 45 ಎಸ್‌ಪಿಕ್ಯೂ 2025,**
**ದಿನಾಂಕ:09.06.2025, ಬೆಂಗಳೂರು**

ಮೇಲೆ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, 2025-26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 338 ರಲ್ಲಿ ಘೋಷಣೆಯಾಗಿರುವಂತೆ ಕೋಲಾರ ಜಿಲ್ಲೆ, ಶಿವಾರಪಟ್ಟಣದ ಕೈಗಾರಿಕಾ ಪ್ರದೇಶದಲ್ಲಿ **multi sector net zero sustainability industrial park** ಅನ್ನು PPP ಮಾದರಿಯಲ್ಲಿ ಸ್ಥಾಪಿಸಲು, ಕೆಐಎಡಿಬಿ ರವರು ಸಲ್ಲಿಸುವ ವಿವರವಾದ ಯೋಜನಾ ವರದಿಯನ್ನು ನಿಯಮಾನುಸಾರ ಸರ್ಕಾರದ ಅನುಮೋದನೆಯನ್ನು ಪಡೆಯುವ ಷರತ್ತಿಗೊಳಪಟ್ಟು ತಾತ್ವಿಕ ಅನುಮೋದನೆಯನ್ನು ನೀಡಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಹಾಗೂ ಅವರ ಹೆಸರಿನಲ್ಲಿ

9/6/25
(ಸಿ.ವಿ. ಹರಿದಾಸನ್)
ಸರ್ಕಾರದ ಅಧೀನ ಕಾರ್ಯದರ್ಶಿ (ಕೈ.ಅ.)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು-ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಪ್ರಕಟಿಸಿದ 100 ಪ್ರತಿಗಳನ್ನು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರಿಗೆ ಒದಗಿಸಲು ಕೋರಿದೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ/ಇ&ಆರ್‌ಎಸ್‌ಎ), ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಮುಖ್ಯಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರು ಕೆ.ಐ.ಎ.ಡಿ.ಬಿ., ಖನಿಜಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
6. ವಿಶೇಷ ಜಿಲ್ಲಾಧಿಕಾರಿಗಳು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ನಿರ್ದೇಶಕರು (ತಾಂತ್ರಿಕ ಕೋಶ), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ.